# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 640 (814) |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.08.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆಯಲ್ಲಿರುವಾಗ ಮೃತರಾಗುವ ಅನುದಾನಿತ ನೌಕರರ ಅವಲಂಬಿತರಿಗೆ ಸುಮಾರು 15-20 ವರ್ಷಗಳಿಂದ ಅನುಕಂಪದ ಆಧಾರದ ಉದ್ಯೋಗ ನೀಡದಿರುವುದರಿಂದ ನೂರಾರು ನೌಕರರ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಗಮನಕ್ಕೆ ಬಂದಿದೆಯೆ; | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದ ಅನುದಾನಿತ ಶಾಲೆಗಳಲ್ಲಿ ಸೇವೆಯಲ್ಲಿರುವಾಗ ಮೃತರಾದ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಅವಕಾಶ ಕಲ್ಪಿಸಲಾಗಿದೆ.<br><br>ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ವೇತನಾನುದಾನಕ್ಕೆ ಒಳಪಟ್ಟು, ಸೇವೆಯಲ್ಲಿರುವಾಗ ಮೃತರಾದ ನೌಕರರ ಅವಲಂಬಿತರಿಗೆ ಕರ್ನಾಟಕ ನಾಗರೀಕ ಸೇವಾ (ಅನುಕಂಪದ ಆಧಾರದ ನೇಮಕಾತಿ) ನಿಯಮಗಳು, 1996ರನ್ವಯ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸರ್ಕಾರದ ಆದೇಶ ಸಂಖ್ಯೆ:ಇಡಿ 102 ಟಿಇಸಿ 2006, ದಿನಾಂಕ:05.01.2010ರ ಪ್ರಕಾರ, ಅವಕಾಶ ಕಲ್ಪಿಸಿ ಆದೇಶಿಸಲಾಗಿತ್ತು.<br><br>ತದನಂತರ, ಆರ್ಥಿಕ ಇಲಾಖೆಯ ಅಭಿಪ್ರಾಯದ ಮೇರೆಗೆ, ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು, 2003ರ ನಿಯಮ 8(2) ಅಡಿಯಲ್ಲಿ ದಿನಾಂಕ: 01.03.2001ರ ನಂತರ ಅನುದಾನಿತ ಕಾಲೇಜುಗಳಲ್ಲಿ ತೆರವಾಗಿರುವ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನ ರಹಿತವಾಗಿರುವುದರಿಂದ, ಈ ಹುದ್ದೆಗಳಿಗೆ ಅನುಕಂಪದ ಆಧಾರದ ನೇಮಕಾತಿಗೆ ಅವಕಾಶ ಕಲ್ಪಿಸಿದ್ದ ಸರ್ಕಾರದ ಆದೇಶ ಸಂಖ್ಯೆ:ಇಡಿ 102 ಟಿಇಸಿ 2006, ದಿನಾಂಕ: 05.01.2010ನ್ನು, ಸರ್ಕಾರದ ಆದೇಶ ಸಂಖ್ಯೆ: ಇಡಿ 128 ಟಿಇಸಿ 2016, ದಿನಾಂಕ:16.06.2021ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.<br><br>ಪ್ರಾಥಮಿಕ ಶಿಕ್ಷಣ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಗಳಿಗೆ ಸಂಬಂಧಿಸಿದ ನಿಯಮಗಳು ಹಾಗೂ ಕಾರ್ಯ ವಿಧಾನಗಳು |
| ಆ) | ಬಂದಿದ್ದಲ್ಲಿ, ಪ್ರಾಥಮಿಕ ಶಿಕ್ಷಣ ಇಲಾಖೆ ಅಡಿಯಲ್ಲಿರುವ ಅನುದಾನಿತ ಶಾಲೆಗಳಲ್ಲಿ ಸೇವೆಯಲ್ಲಿರುವಾಗ ಮೃತರಾಗುವ ಅನುದಾನಿತ ನೌಕರರ ಅವಲಂಬಿತರರಿಗೆ ಅನುಕಂಪದ ಆಧಾರದ ಉದ್ಯೋಗ ನೀಡಲಾಗುತ್ತಿದೆಯೇ; ಈ ರೀತಿ ಒಂದು ಇಲಾಖೆಯ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಅನುಕಂಪದ ನೇಮಕಾತಿ ನೀಡಿ ಮತ್ತೊಂದು ಇಲಾಖೆಯಲ್ಲಿ ನಿರಾಕರಿಸುವುದು ಸಂವಿಧಾನದ ಹಕ್ಕುಗಳ ಉಲ್ಲಂಘನೆಯಲ್ಲವೇ; | |

| | | |
|---|---|---|
| | | ವಿಭಿನ್ನವಾಗಿವೆ. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದ ಅನುದಾನಿತ ಶಾಲೆಗಳಲ್ಲಿ ನಿವೃತ್ತಿ, ಮರಣ ಅಥವಾ ರಾಜೀನಾಮೆಯಿಂದ ಖಾಲಿಯಾಗುವ ಹುದ್ದೆಗಳು ರದ್ದಾಗುವುದಿಲ್ಲ.<br><br>ಆದರೆ, ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು, 2003ರ ನಿಯಮ 8(2) ಪ್ರಕಾರ, ದಿನಾಂಕ:01.03.2001ರ ನಂತರ ತೆರವಾಗಿರುವ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನ ರಹಿತವಾಗಿರುತ್ತವೆ. ಈ ಹಿನ್ನೆಲೆಯಲ್ಲಿ, ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ, ಅನುಕಂಪದ ಆಧಾರದ ನೇಮಕಾತಿಗೆ ಅವಕಾಶ ಕಲ್ಪಿಸಿರುವುದಿಲ್ಲ. |
| ಇ) | ಯಾವ ಕಾಲಮಿತಿಯೊಳಗೆ ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಅನುಕಂಪದ ನೇಮಕಾತಿಗೆ ಅವಕಾಶ ಕಲ್ಪಿಸಲಾಗುವುದು? (ಮಾಹಿತಿ ನೀಡುವುದು) | ಉದ್ಭವಿಸುವುದಿಲ್ಲ. |

**ಸಂಖ್ಯೆ:ಇಡಿ 107 ಟಿಪಿಇ 2025**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು